ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಅಧಿವೇಶನ [?]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ [?]    ದಿನಾಂಕ : DATE : 2/2/2021 [?]

## ಮೇಲ್ಮನೆಯಲ್ಲಿ ಮೊಬೈಲ್ ಬಳಕೆ ನಿಷೇಧ

ವಿಧಾನ ಪರಿಷತ್ತು: ಕಾಂಗ್ರೆಸ್ ಸದಸ್ಯ ಪ್ರಕಾಶ್ ರಾಥೋಡ್ ಅಶ್ಲೀಲ ಚಿತ್ರ ವೀಕ್ಷಣೆ ಆರೋಪ ಕೇಳಿಬಂದ ಬೆನ್ನಲ್ಲೇ ಮೇಲ್ಮನೆಯಲ್ಲಿ ಮೊಬೈಲ್ ಬಳಕೆ ನಿಷೇಧಿಸಲಾಗಿದೆ. 2011ರಲ್ಲಿನ ಆದೇಶದಂತೆ ಸದನದಲ್ಲಿ ಎಲ್ಲ ಸದಸ್ಯರು ಮೊಬೈಲ್ ಬಳಕೆ ಮಾಡುವಂತಿಲ್ಲ, ಪ್ರವೇಶಿಸುವ ಮುನ್ನ ಮೊಬೈಲ್ ಸ್ವಿಚ್ಆಫ್ ಮಾಡಬೇಕು. ಮೇಲ್ಮನೆಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು ಮೊಬೈಲ್‌ಗಳಲ್ಲಿ 'ಶೇರ್' ಮಾಡುವ ಮುನ್ನ ಅನುಮತಿ ಪಡೆಯುವುದು ಕಡ್ಡಾಯ ಎಂದು ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಪ್ರಕಟಿಸಿದರು. ಶುಕ್ರವಾರವಷ್ಟೇ ಪ್ರಕಾಶ್ ರಾಥೋಡ್ ಅವರು ಕಲಾಪ ವೇಳೆ ಮೊಬೈಲ್‌ನಲ್ಲಿ ಅಶ್ಲೀಲ ಚಿತ್ರ ವೀಕ್ಷಿಸುತ್ತಿದ್ದರು. ಇದು ಮಾಧ್ಯಮಗಳಲ್ಲಿ ಸೆರೆಯಾಗಿತ್ತು. ಆದರೆ, ಈ ಆರೋಪವನ್ನು ಪ್ರಕಾಶ್ ರಾಥೋಡ್ ತಳ್ಳಿಹಾಕಿದ್ದರು.